ಮಂಡಿಸಲಾಗಿತ್ತು. ಇದರ ಬಗ್ಗೆ ಚರ್ಚಿಸಿ, ಈ ಕರಡು ತಿದ್ದುಪಡಿಯನ್ನು ವಿಧಾನ ಮಂಡಲದ ಜಂಟಿ ಆಯ್ಕೆ ಸಮಿತಿಗೆ ವರದಿಗಾಗಿ ಒಪ್ಪಿಸಲಾಗಿದೆ. ವಿಧಾನ ಸಭೆಯು ವಿಸರ್ಜನೆಯಾದುದರಿಂದ ಅದರ ವರದಿ ಬಂದಿರುವದಿಲ್ಲ. ಮತ್ತೊಮ್ಮೆ ಜಂಟಿ ಆಯ್ಕೆ ಸಮಿತಿಯನ್ನು ರಚಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಉ) ಮೇಲಿನಂತೆ.

ವಿಷಯ : ಬಸ್‌ದರ ಏರಿಕೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೬೬೬ (೧೧೨೦)

ಶ್ರೀ ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ) :– ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬಸ್ ದರ ಪುನ: ಏರಿಸುವ ವಿಷಯ ಸರ್ಕಾರ ಯೋಚಿಸುತ್ತಿದೆಯೇ ?

ಆ) ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು ?

ಶ್ರಿ ಅಜೀಜ್ ಸೇಠ್ (ಸಾರಿಗೆ ಸಚಿವರು):– ಅ) ಈ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಆ) ಭಾರತ ಸರ್ಕಾರವು ದಿ. ೧೫–೧೦–೯೦ ರಿಂದ ಡೀಸಲ್ ತೈಲದ ಮತ್ತು ಪೆಟ್ರೋಲಿಯಂ ಉತ್ಪನ್ನಗಳ ಮೇಲಿನ ಬೆಲೆಗಳನ್ನು ತೀವ್ರವಾಗಿ ಹೆಚ್ಚಿಸಿರುವುದರಿಂದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ನಿರ್ವಹಣಾ ವೆಚ್ಚವು ಹೆಚ್ಚಾಗಿರುವುದೇ ಇದಕ್ಕೆ ಕಾರಣ.

ವಿಷಯ : ರಾಜ್ಯದ ಯುವಜನ ಸಂಘ ಸಂಸ್ಥೆಗಳಿಗೆ ಉತ್ಸಾಹ ನೀಡಲು ಪ್ರೋತ್ಸಾಹ ನಿಧಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ ೬೬೮ (೧೧೧೮)

ಶ್ರೀ ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ) :– ಮಾನ್ಯ ಯುವಜನ ಸೇವಾ ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕರ್ನಾಟಕ ರಾಜ್ಯದ ನೊಂದಾಯಿತ ಯುವ ಜನ ಸಂಘ ಸಂಸ್ಥೆಗಳಿಗೆ ಉತ್ಸಾಹ ನೀಡಲು ಯುವ ಜನ ಸೇವಾ ಇಲಾಖೆಯಿಂದ ಸೇವಾ ಕಾರ್ಯಕ್ಕೆ ರಾಜ್ಯ ಮಟ್ಟದ ಸ್ಪರ್ಧೆ ಏರ್ಪಡಿಸಲಾಗುವುದೆ ?

ಆ) ಈ ಕಾರ್ಯಕ್ಕೆ ಬಹುಮಾನ ಇತ್ಯಾದಿಗಳಿಗೆ ಪ್ರೋತ್ಸಾಹ ನಿಧಿ ಏರ್ಪಡಿಸಲು ಸರ್ಕಾರ ಯೋಚಿಸುತ್ತಿದೆಯೇ ?

ಶ್ರೀ ಎಸ್. ರಮೇಶ್ (ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವಾ ಸಚಿವರು) :–

ಅ) ಹೌದು